# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 08.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಇಂದು ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ.49, ಲಿಂಗರಾಜಪುರ ವಾರ್ಡ್‌ನಲ್ಲಿ ಕೈಗೊಂಡ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಪರಿಶೀಲನೆ ನಡೆಸಿದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಶೇಕಡ 22.75ರ ಅನುದಾನದ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಪ್ರತಿ ಮನೆಗೆ ರೂ.3.00 ಲಕ್ಷ ಅನುದಾನದ ಅಡಿಯಲ್ಲಿ ನಿರ್ಮಿಸಿರುವ ವಸತಿ ಕಟ್ಟಡವನ್ನು ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ, ಸ್ಥಳೀಯ ಶಾಸಕರಾದ ಶ್ರೀ ಕೆ.ಜೆ. ಜಾರ್ಜ್ ಹಾಗೂ ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀಮತಿ ಲಾವಣ್ಯ ಗಣೇಶ್ ರೆಡ್ಡಿ ರವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಹಾಜರಿದ್ದ ಸ್ಥಳೀಯ ಕೊಳಚೆ ಪ್ರದೇಶದ ನಿವಾಸಿಗಳು ಮೇಲ್ಕಂಡ ಯೋಜನೆಯನ್ನು ಆರ್ಥಿಕವಾಗಿ ಹಿಂದುಳಿದ ಹಾಗೂ ಅಲ್ಪಸಂಖ್ಯಾತರಿಗೂ ಸಹ ವಿಸ್ತರಿಸಲು ಹಾಗೂ ಶೇಕಡ 22.75ರ ಅನುದಾನದ ಅಡಿಯಲ್ಲಿ ಇನ್ನೂ ಹೆಚ್ಚಿನ ವಸತಿ ಕಟ್ಟಡಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳುವಂತೆ ಆಯುಕ್ತರಲ್ಲಿ ಕೋರಿದರು. ಇದಕ್ಕೆ ಪ್ರತಿಕ್ರಿಯಿಸಿದ ಆಯುಕ್ತರು ಪ್ರಸಕ್ತ ಹಣಕಾಸಿನ ವರ್ಷದಲ್ಲಿ ಇನ್ನೂ ಹೆಚ್ಚಿನ ಅನುದಾನವನ್ನು ಒದಗಿಸಲು ನಗರ ಪಾಲಿಕೆಯ ಸಭೆಯಲ್ಲಿ ಒಪ್ಪಿಗೆ ಪಡೆದು, ಆಯವ್ಯಯದಲ್ಲಿ ಅನುದಾನವನ್ನು ಒದಗಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ಇದೇ ವಾರ್ಡಿನ ಚೌಡೇಶ್ವರಿ ಬಡಾವಣೆ ಉದ್ಯಾನವನಕ್ಕೆ ಮಂಜೂರಾತಿಯಾಗಿದ್ದ ಹಸಿರು ಹೊದಿಕೆ ಕಾಮಗಾರಿಯನ್ನು ರದ್ದುಗೊಳಿಸಿ, ವೃಕ್ಷ ಉದ್ಯಾನವನ ಮತ್ತು ಪಾದಚಾರಿ ಮಾರ್ಗ ಅಭಿವೃದ್ಧಿಪಡಿಸುವಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಆಯುಕ್ತರು ಸೂಚನೆ ನೀಡಿದರು. ಹಾಗೂ ಇನ್ನುಮುಂದೆ ಕಡ್ಡಾಯವಾಗಿ ಎಲ್ಲಾ ಉದ್ಯಾನವನಗಳನ್ನು ವೃಕ್ಷ ಉದ್ಯಾನವನವನ್ನಾಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ತದನಂತರ ಆಯುಕ್ತರು ಕೆ.ಎಸ್.ಎಫ್.ಸಿ. ಬಡಾವಣೆಯಲ್ಲಿ ಪರಿಶೀಲನೆ ನಡೆಸಿ, ಮಳೆ ಬಂದಾಗಲೆಲ್ಲಾ ಈ ಬಡಾವಣೆಗೆ ನೀರು ನುಗ್ಗುತ್ತಿದ್ದು, ಬಡಾವಣೆಯಲ್ಲಿ ಹರಿಯುವ ಸೆಕೆಂಡರಿ ಡ್ರೈನ್‌ನಲ್ಲಿ ತುಂಬಿಕೊಂಡಿರುವ ಹೂಳನ್ನು ಈ ಕೂಡಲೇ ತೆಗೆದು, ಮಳೆ ನೀರು ಸರಾಗವಾಗಿ ಹರಿಯುವಂತೆ ಕ್ರಮ ಜರುಗಿಸಲು ಮುಖ್ಯ ಅಭಿಯಂತರರು (ಪೂರ್ವ) ರವರಿಗೆ ಸೂಚನೆ ನೀಡಿದರು.

ಪಾಲಿಕೆಯ ವತಿಯಿಂದ ಹಮ್ಮಿಕೊಳ್ಳಲಾಗುವ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮದಲ್ಲಿ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರು ಸಹ ಭಾಗವಹಿಸಿ, ಪಾಲಿಕೆಗೆ ಸಹಕಾರ ನೀಡಲು ಆಯುಕ್ತರು ಕೋರಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**